RNU AIR DHARWAD

**JANUARY 7,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ಇಂದು ದಕ್ಷಿಣ ಕನ್ನಡ ಜಿಲ್ಲೆಗೆ ಆಗಮಿಸಲಿದ್ದಾರೆ. ದೆಹಲಿಯಿಂದ ಹೊರಟು ಮಧ್ಯಾಹ್ನ 1.05ಕ್ಕೆ ಮಂಗಳೂರು ವಿಮಾನ ನಿಲ್ದಾಣ ತಲುಪಲಿರುವ ಉಪರಾಷ್ಟ್ರಪತಿಗಳು ಬಳಿಕ ಹೆಲಿಕಾಪ್ಟರ್ ಮೂಲಕ ಧರ್ಮಸ್ಥಳ ಹೆಲಿಪ್ಯಾಡ್‌ಗೆ ಆಗಮಿಸುವರು. 2 ಗಂಟೆಗೆ ಶ್ರೀ ಕ್ಷೇತ್ರ ಧರ್ಮಸ್ಥಳಕ್ಕೆ ಭೇಟಿ ನೀಡಲಿದ್ದು, ಶ್ರೀ ಮಂಜುನಾಥ ಸ್ವಾಮಿಯ ದರ್ಶನ ಪಡೆಯಲಿದ್ದಾರೆ. ಆನಂತರ ಭಕ್ತರ ಸರತಿ ಸಾಲು ನಿಯಂತ್ರಿಸಲು ನಿರ್ಮಾಣಗೊಂಡಿರುವ ನೂತನ 'ಶ್ರೀ ಸಾನಿಧ್ಯ' ಸಂಕೀರ್ಣವನ್ನು ಉದ್ಘಾಟಿಸಲಿದ್ದಾರೆ

<><><>

ಜನೆವರಿ 8, 1950 ಧಾರವಾಡ ಆಕಾಶವಾಣಿ ತನ್ನ ಸಾರ್ವಜನಿಕ ಪ್ರಸಾರ ಸೇವೆ ಆರಂಭಿಸಿದ ಸುದಿನ. ನಾಳೆಗೆ 75 ವರ್ಷಗಳನ್ನು ಪೂರೈಸುತ್ತಿರುವ ಸಂದರ್ಭ, ನಾಳೆ ಸಂಜೆ 5 ಗಂಟೆ 30 ನಿಮಿಷಕ್ಕೆ ಅಮೃತ ಮಹೋತ್ಸವ ವರ್ಷಾಚಾರಣೆ ಅಂಗವಾಗಿ ವಿಶೇಷ ಕಾರ್ಯಕ್ರಮ ಆಯೋಜಿಸಿದೆ. ಈ ಸಂದರ್ಭ ಆಕಾಶವಾಣಿ ಧಾರವಾಡ ಕೇಂದ್ರದ ತಾಂತ್ರಿಕ ವಿಭಾಗದ ಸಹಾಯಕ ನಿರ್ದೇಶಕರಾದ ವೆಂಕಟೇಶ ಎಸ್ ದೇಶಪಾಂಡೆ ಅವರು ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಬೈಟ್: ವೆಂಕಟೇಶ ದೇಶಪಾಂಡೆ 35 ಸೆಕೆಂದುಗಳು

<><><>

16ನೇ ಆವೃತ್ತಿಯ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವವು ಮಾರ್ಚ್ 1ರಿಂದ 8ರ ವರೆಗೆ ಆಯೋಜಿತವಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನಿರ್ಧರಿಸಲಾಯಿತು. ಈ ಬಾರಿಯ ಚಲನಚಿತ್ರೋತ್ಸವದ ಘೋಷವಾಕ್ಯವಾಗಿ 'ಸರ್ವ ಜನಾಂಗದ ಶಾಂತಿಯ ತೋಟ' ಆಯ್ಕೆ ಯಾಗಿದೆ. ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು,

2006ರಲ್ಲಿ ಆರಂಭವಾದ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಇದೀಗ 16ನೇ ಆವೃತ್ತಿಗೆ ಪ್ರವೇಶಿಸಿದೆ, 9 ಕೋಟಿ ರೂಪಾಯಿ ವೆಚ್ಚದಲ್ಲಿ ಚಲನಚಿತ್ರೋತ್ಸವವನ್ನು ಆಯೋಜಿಸಲಾಗುತ್ತಿದೆ ಎಂದರು.

<><><>

ಡಾಕ್ಟರ್ ನಾ. ಡಿಸೋಜಾ ಅವರು ಜನಸಾಮಾನ್ಯರ ಅನುಭೂತಿ ಇಟ್ಟುಕೊಂಡು ಕಥೆ, ಕಾದಂಬರಿ ರಚನೆ ಮಾಡಿ ಜನಪ್ರಿಯ ಸಾಹಿತಿಯಾದರು ಎಂದು ಹಿರಿಯ ಸಾಹಿತಿ ಡಾಕ್ಟರ ಶಾಮಸುಂದರ ಬಿದರಕುಂದಿ ಹೇಳಿದರು. ಧಾರವಾಡ ನಗರದ ಮನೋಹರ ಗ್ರಂಥಮಾಲಾ ಅಟ್ಟದಲ್ಲಿ ಜಿ.ಬಿ. ಜೋಶಿ ಮೆಮೋರಿಯಲ್ ಟ್ರಸ್ಟ್ ಸಹಯೋಗದಲ್ಲಿ ನಡೆದ ನಾ. ಡಿಸೋಜಾ ಅವರ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದರು. ಮುಳುಗಡೆ ಅವರ ಸಾಹಿತ್ಯದ ಸ್ಥಾಯಿವಸ್ತು. ಮುಳುಗಡೆ ಪ್ರದೇಶದ ಜನರ ಬದುಕು, ಬವಣೆ, ನೋವು, ನಲಿವುಗಳನ್ನು ಮನಮುಟ್ಟುವಂತೆ ಕಟ್ಟಿಕೊಟ್ಟಿದ್ದು ವಿಶೇಷತೆ ಎಂದರು.

<><><>

ಗದಗ ಶ್ರೀ ವೀರೇಶ್ವರ ಪುಣ್ಯಾಶ್ರಮದ ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಶಿಷ್ಯ ಹಾಗೂ ಕೀರ್ತನಕಾರ, ಆಕಾಶವಾಣಿ ಸಂಗೀತಗಾಂರೂ ಆಗಿದ್ದ ಪಂಡಿತ ಸಿದ್ದೇಶ್ವರ ಶಾಸ್ತ್ರೀ ತೆಲ್ಲೂರ ನಿನ್ನೆ ಬೆಂಗಳೂರಿನಲ್ಲಿ ನಿಧನರಾದರು. ಅವರಿಗೆ 63 ವರ್ಷ ವಯಸ್ಸಾಗಿತ್ತು . ಇಂದು ಮಧ್ಯಾಹ್ನ 3 ಗಂಟೆಗೆ ಗದಗ ಹೊಂಬಳ ನಾಕಾದಲ್ಲಿ ಪಾರ್ಥಿವ ಶರೀರದ ಅಂತ್ಯಕ್ರಿಯೆ ಜರುಗಲಿದೆ. ಗಣ್ಯರು ಕಂಬನಿ ಮಿಡಿದಿದ್ದಾರೆ.

<><><>

ಧಾರವಾಡ ಜಿಲ್ಲೆಯ ಅಂತಿಮ ಪರಿಷ್ಕೃತ ಮತದಾಂರ ಪಟ್ಟಿ ಯನ್ನು ಜಿಲ್ಲಾಧಿಕಾರಿ ದಿವ್ಯ ಪ್ರಭು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬಿಡುಗಡೆ ಮಾಡಿದರು. ಜಿಲ್ಲೆಯಲ್ಲಿ 8 ಲಕ್ಷದ 5 ಸಾವಿರದ 768 ಜನ ಪುರುಷ ಹಾಗೂ 8 ಲಕ್ಷದ 10 ಸಾವಿರದ 647 ಮಹಿಳೆಯರು ಹಾಗೂ 95 ಜನ ತೃತೀಯ ಲಿಂಗಿ ಮತದಾರರು ಸೇರಿದಂತೆ ಒಟ್ಟು 16 ಲಕ್ಷದ 16 ಸಾವಿರದ 415 ಜನ ಮತದಾರರು ಇದ್ದಾರೆ ಎಂದು ಅವರು ತಿಳಿಸಿದರು.

<><><>

ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ನ, ಎರಡನೇ ಜಾಂಬೋರೇಟ್, ಯಾದಗಿರಿಯಲ್ಲಿ ಈ ತಿಂಗಳ 17 ರಿಂದ 21ರ ವರೆಗೆ ನಡೆಯಲಿದೆ. ಏಳು ಜಿಲ್ಲೆಗಳಿಂದ, 3 ಸಾವಿರದ ಐನೂರು ಮಕ್ಕಳು, ಕಲ್ಯಾಣ ಕರ್ನಾಟಕದ ಜಾಂಬೋರೇಟ್‌ನಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು, ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ಪ್ರಧಾನ ಆಯುಕ್ತ, ಪಿ.ಜಿ.ಆರ್. ಸಿಂಧ್ಯಾ ತಿಳಿಸಿದ್ದಾರೆ. ಯಾದಗಿರಿ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ, ಜಾಂಬೋರೇಟ್ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ, 'ಲಾಂಛನ' ಬಿಡುಗಡೆ ಮಾಡಿ, ಅವರು, ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಯಾದಗಿರಿ ಜಿಲ್ಲಾಧಿಕಾರಿ ಬಿ.ಸುಶೀಲಾ ಮಾತನಾಡಿ, ಜಾಂಬೋರೇಟ್ ಸಂಘಟಿಸಲು, ಜಿಲ್ಲೆಗೆ ಅಪರೂಪದ ಅವಕಾಶ ಲಭಿಸಿದೆ, ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>